**ಕರ್ನಾಟಕ ವಿಧಾನ ಪರಿಷತ್ತು**

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 74(146) |
| 2. | ಸದಸ್ಯರ ಹೆಸರು | : | ಶ್ರೀ ಅ.ದೇವೇಗೌಡ (ಪದವೀಧರರ ಕ್ಷೇತ್ರ) |
| 3. | ಉತ್ತರಿಸಬೇಕಾದ ದಿನಾಂಕ | : | 01.02.2021 |
| 4. | ಉತ್ತರಿಸಬೇಕಾದ ಸಚಿವರು | : | ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಆರು (6) ಕೋಟಿಗೂ ಮಿಗಿಲಾದ ಜನಸಂಖ್ಯೆಯುಳ್ಳ ರಾಜ್ಯದಲ್ಲಿ ನರರೋಗ ಕಾಯಿಲೆಯಿಂದ ನರಳುತ್ತಿರುವ ರೋಗಿಗಳು ರಾಜ್ಯದ ಏಕೈಕ NIMHANS ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ.<br><br>ನಿಮ್ಹಾನ್ಸ್ ಸಂಸ್ಥೆಯು ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನಕ್ಕೆ ಸಂಬಂಧಿಸಿದಂತೆ ಚಿಕಿತ್ಸೆ ನೀಡುವ ರಾಷ್ಟ್ರೀಯ ಸಂಸ್ಥೆಯಾಗಿದ್ದು, ಸಂಪೂರ್ಣವಾಗಿ ಕೇಂದ್ರ ಸರ್ಕಾರದ ಆಡಳಿತಾತ್ಮಕ ನಿಯಂತ್ರಣದಲ್ಲಿರುತ್ತದೆ.<br><br>ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳಲ್ಲಿ ಭಾರತೀಯ ವೈದ್ಯಕೀಯ ಮಂಡಳಿಯ ಮಾರ್ಗಸೂಚಿಯನುಸಾರ ಅವಶ್ಯವಿರುವ ನರರೋಗ ತಜ್ಞರು ಲಭ್ಯವಿದ್ದು, ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆಯನ್ನು ಒದಗಿಸಲಾಗುತ್ತಿದೆ. |
| ಆ) | ನರರೋಗಕ್ಕೆ ಸಂಬಂಧಿಸಿದ ವಿವಿಧ ಕಾಯಿಲೆಗಳಿಗೆ ಉತ್ತಮ ಚಿಕಿತ್ಸೆ ನೀಡಲು ಶ್ರಮಿಸುತ್ತಿರುವ ಕೇಂದ್ರ ಸರ್ಕಾರದ NIMHANS ಆಸ್ಪತ್ರೆಯ ಶಾಖೆಗಳನ್ನು ರಾಜ್ಯದ ವಿವಿಧ ಕಡೆ ತೆರೆಯುವ ಅವಶ್ಯಕತೆ ಬಗ್ಗೆ ಸರ್ಕಾರ ಪರಿಶೀಲಿಸಿ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಕ್ರಮ ಕೈಗೊಳ್ಳುವುದೇ? | ನಿಮ್ಹಾನ್ಸ್ ಸಂಸ್ಥೆಯು ರಾಷ್ಟ್ರೀಯ ಸಂಸ್ಥೆಯಾಗಿದ್ದು ರಾಜ್ಯದ ವಿವಿಧ ಕಡೆ ಸದರಿ ಆಸ್ಪತ್ರೆಯ ಶಾಖೆಗಳನ್ನು ತೆರೆಯುವ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

**ಸಂಖ್ಯೆ:** ಎಂಇಡಿ 48 ಎಂಎಸ್ಎಫ್ 2021

**(ಡಾ: ಕೆ. ಸುಧಾಕರ್)**
ವೈದ್ಯಕೀಯ ಶಿಕ್ಷಣ ಸಚಿವರು.